ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು- 560001

ಸಂಖ್ಯೆ: ಸಿ4(6) ಎಸ್.ಎಸ್.ಎಲ್.ಸಿ.ಪೂ.ಸಿ.ಪರೀಕ್ಷೆ 01/2012-13 ದಿನಾಂಕ: 09.12.2013

## ಸುತ್ತೋಲೆ

ವಿಷಯ: 2013-14ನೇ ಸಾಲಿನ ಎಸ್.ಎಸ್.ಎಲ್.ಸಿ. ಪೂರ್ವ ಸಿದ್ಧತಾ ಪರೀಕ್ಷೆ ನಡೆಸುವ ಬಗ್ಗೆ.

ಉಲ್ಲೇಖ: 1. ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ರವರ ಪತ್ರ ಸಂಖ್ಯೆ: ಎಕ 174ನೇ ಮಂ.ಸಭೆ/2013-14, ದಿನಾಂಕ: 14.11.2013.

2. ಮಂಡಳಿಯ 174ನೇ ಸಭಾ ನಡಾವಳಿ ದಿನಾಂಕ: 10.07.2013.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಏಪ್ರಿಲ್-2014ರ ಎಸ್.ಎಸ್.ಎಲ್.ಸಿ ಪಬ್ಲಿಕ್ ಪರೀಕ್ಷೆಗೆ ಪೂರ್ವಭಾವಿಯಾಗಿ ತಾಲ್ಲೂಕು ಹಂತದಲ್ಲಿ, ಜಿಲ್ಲಾ ಹಂತದಲ್ಲಿ ಮತ್ತು ರಾಜ್ಯ ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸುವ ಕುರಿತಂತೆ ಮಂಡಳಿಯ 174ನೇ ಸಭೆಯ ನಡಾವಳಿಯನ್ವಯ ಎಸ್.ಎಸ್.ಎಲ್.ಸಿ. ಪಬ್ಲಿಕ್ ಪರೀಕ್ಷೆಗೆ ಪೂರ್ವಭಾವಿಯಾಗಿ ತಾಲ್ಲೂಕು ಹಂತದಲ್ಲಿ, ಜಿಲ್ಲಾ ಹಂತದಲ್ಲಿ ಮತ್ತು ರಾಜ್ಯ ಹಂತದಲ್ಲಿ ಶಿಕ್ಷಕರ ಸಂಘಗಳು ಪ್ರಶ್ನೆ ಪತ್ರಿಕೆ ತಯಾರಿಸಿ, ವಿದ್ಯಾರ್ಥಿಗಳಿಗೆ 4 ರಿಂದ 5 ಪೂರ್ವಭಾವಿ ಪರೀಕ್ಷೆಗಳನ್ನು ನಡೆಸಿ ವಿದ್ಯಾರ್ಥಿಗಳಿಗೆ ಮಾನಸಿಕ ಹೊರೆಯಾಗುತ್ತಿರುವುದನ್ನು ಗಮನಿಸಲಾಗಿದೆ. ಈ ಹಿನ್ನಲೆಯಲ್ಲಿ ಉಲ್ಲೇಖ(2)ರ ಸಭೆಯಲ್ಲಿ ಚರ್ಚಿಸಿದಂತೆ ಶಾಲೆಗಳಲ್ಲಿ ಪರೀಕ್ಷಾ ವರ್ಷದ ಡಿಸೆಂಬರ್ ಮತ್ತು ಜನವರಿ ಒಳಗೆ ಪಠ್ಯ ವಸ್ತುವಿನ ಬೋಧನೆ ಮುಗಿಸುವುದು. ಮಂಡಳಿಯು ಹೊರಡಿಸಿರುವ ನೀಲನಕ್ಷೆಗನುಸಾರ ತಯಾರಿಸಿದ ಪ್ರಶ್ನೆ ಪತ್ರಿಗೆಗಳನ್ನು ಉಪಯೋಗಿಸಿ ವಿದ್ಯಾರ್ಥಿಗಳಿಗೆ 02 ಪೂರ್ವಭಾವಿ ಪರೀಕ್ಷೆಗಳನ್ನು ಆಯಾ ವರ್ಷದ ಫೆಬ್ರವರಿ ಮಾಹೆಯೊಳಗೆ ಮುಗಿಸುವುದು. ಈ ಬಗ್ಗೆ ಉಪನಿರ್ದೇಶಕರು(ಆಡಳಿತ) ರವರು ತಮ್ಮ ಜಿಲ್ಲೆಯಲ್ಲಿನ ಶಾಲೆಗಳಲ್ಲಿ ಕಟ್ಟುನಿಟ್ಟಾಗಿ ಕ್ರಮ ವಹಿಸುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಈ ಕಛೇರಿಗೆ ವರದಿ ಮಾಡುವಂತೆ ತಿಳಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

ಗೆ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು. ಇವರಿಗೆ ಮಾಹಿತಿಗಾಗಿ.